ಕರ್ನಾಟಕ ಸರ್ಕಾರ

ಸಂಖ್ಯೆ: ಕಾಇ 21 ಎಲ್‌ಎಂಡಬ್ಲ್ಯೂ 2017(ಆ)

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಕಾಸ ಸೌಧ,
ಬೆಂಗಳೂರು, ದಿನಾಂಕ: 5-12-2019.

## ತಿದ್ದುಪಡಿ

ಸರ್ಕಾರದ ದಿನಾಂಕ: 31.10.2019ರ ಸಂಖ್ಯೆ: ಕಾಇ 21 ಎಲ್‌ಎಂಡಬ್ಲ್ಯೂ 2017 (ಆ) ರ ಅಧಿಸೂಚನೆ ಪುಟ ಸಂಖ್ಯೆ:2ರ ಕಂಡಿಕೆ-4ರಲ್ಲಿ "ಈ ಅಧಿಸೂಚನೆ ಮೂಲಕ ಪರಿಷ್ಕರಿಸಲಾದ ಕನಿಷ್ಠ ವೇತನ ದರಗಳು ಮುಂದಿನ 2 ವರ್ಷಗಳ ತನಕ ಜಾರಿಯಲ್ಲಿರುತ್ತವೆ. ಅಧಿಸೂಚನೆ ಹೊರಡಿಸಿದ ದಿನಾಂಕದಿಂದ 2 ವರ್ಷಗಳ ಅವಧಿ ಮುಗಿದ ನಂತರ, ಆ ಸಂದರ್ಭದಲ್ಲಿರುವ ಒಟ್ಟು ಕನಿಷ್ಠ ವೇತನಕ್ಕೆ (ಮೂಲ ವೇತನ + ವ್ಯತ್ಯಸ್ಥ ತುಟ್ಟಿಭತ್ಯೆ) ಶೇ 10 ರಷ್ಟು ವೇತನ ಹೆಚ್ಚಳವನ್ನು ಸೇರಿಸಿ, ಕನಿಷ್ಠ ವೇತನ ದರಗಳನ್ನು ಪಾವತಿಸಲು ಉದ್ಯೋಗಸ್ಥರು ಬಾಧ್ಯಸ್ಥರಾಗಿರುತ್ತಾರೆ." ಎಂಬ ಅಂಶಗಳನ್ನು ಕೈಬಿಡಲಾಗಿದೆ.

ಉಳಿದಂತೆ, ಸದರಿ ಅಧಿಸೂಚನೆಯಲ್ಲಿ ಯಾವುದೇ ಬದಲಾವಣೆಗಳು ಇರುವುದಿಲ್ಲ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,
5.12.2019
(ಎಲ್.ಎಸ್. ಶ್ರೀಕಂಠಬಾಬು)
ಸರ್ಕಾರದ ಉಪ ಕಾರ್ಯದರ್ಶಿ
ಕಾರ್ಮಿಕ ಇಲಾಖೆ.

ಇವರಿಗೆ,

ಸಂಕಲನಕಾರರು, ಸರ್ಕಾರಿ ಮುದ್ರಣಾಲಯ, ಬೆಂಗಳೂರು ಇವರಿಗೆ, ಈ ತಿದ್ದುಪಡಿ ಆದೇಶವನ್ನು ವಿಶೇಷ ರಾಜ್ಯ ಪತ್ರದಲ್ಲಿ ಪ್ರಕಟಿಸಿ, ಸದರಿ ಪ್ರಕಟಣೆಯ 200 ಪ್ರತಿಗಳನ್ನು ಸರ್ಕಾರದ ಕಾರ್ಯದರ್ಶಿಗಳು, ಕಾರ್ಮಿಕ ಇಲಾಖೆ, 4ನೇ ಮಹಡಿ, ವಿಕಾಸಸೌಧ, ಬೆಂಗಳೂರು-1 ಇವರಿಗೆ, ಕಳುಹಿಸುವಂತೆ ಕೋರಲಾಗಿದೆ.

ಪ್ರತಿಗಳು:-

1. ಕಾರ್ಮಿಕ ಆಯುಕ್ತರು, ಕಾರ್ಮಿಕ ಭವನ, ಬನ್ನೇರುಘಟ್ಟ ರಸ್ತೆ, ಬೆಂಗಳೂರು-29.
2. ರಾಜ್ಯದ ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳಿಗೆ. (ಕಾರ್ಮಿಕ ಆಯುಕ್ತರ ಮೂಲಕ)
3. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳು (ಕಾರ್ಮಿಕ ಆಯುಕ್ತರ ಮೂಲಕ).

4. ನಿರ್ದೇಶಕರು, ವಾರ್ತಾ ಮತ್ತು ಪ್ರಚಾರ ಇಲಾಖೆ, ವಾರ್ತಾ ಭವನ, ಇನ್‌ಫೆಂಟ್ರಿ ರಸ್ತೆ, ಬೆಂಗಳೂರು.
5. ಸದಸ್ಯ ಕಾರ್ಯದರ್ಶಿ, ಕರ್ನಾಟಕ ಕನಿಷ್ಠ ವೇತನ ಸಲಹಾ ಮಂಡಳಿ, ಕಾರ್ಮಿಕ ಆಯುಕ್ತರ ಕಚೇರಿ, ಕಾರ್ಮಿಕ ಭವನ, ಬೆಂಗಳೂರು.
6. ಎಲ್ಲಾ ಜಿಲ್ಲೆಗಳ ಕಾರ್ಮಿಕ ಅಧಿಕಾರಿಗಳಿಗೆ (ಕಾರ್ಮಿಕ ಆಯುಕ್ತರ ಮೂಲಕ).
7. ಮಾನ್ಯ ಕಾರ್ಮಿಕ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
8. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆ, ವಿಕಾಸಸೌಧ, ಬೆಂಗಳೂರು.
9. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಕಾರ್ಮಿಕ ಇಲಾಖೆ.
10. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಕಾರ್ಮಿಕ ಇಲಾಖೆ.
11. ಶಾಖಾ ರಕ್ಷ ಕಡತ/ಹೆಚ್ಚುವರಿ ಪ್ರತಿ.